ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯ ಮತ್ತು ನಿಲಯ ಪಾಲಕರ ಬಗ್ಗೆ

ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :-

641 (860) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ರಾಜ್ಯಾದ್ಯಂತ ಇರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹೊಸದಾಗಿ ವಸತಿ ನಿಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದಲ್ಲಿ ಇದೆಯೇ ; ಇದ್ದಲ್ಲಿ, ಎಲ್ಲೆಲ್ಲಿ ಎಷ್ಟು ವಸತಿ ನಿಲಯಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ ; (ವಿವರ ನೀಡುವುದು)

(ಇ) ಎಲ್ಲಾ ವಸತಿ ನಿಲಯಗಳಲ್ಲಿ ಕಾರ್ಯನಿರ್ವಹಿಸಲು ನಿಲಯ ಪಾಲಕರನ್ನು ನೇಮಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ನಿಲಯ ಪಾಲಕರ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಎಲ್ಲಾ ವಸತಿ ನಿಲಯಗಳಲ್ಲಿ ಮೂಲಸೌಕರ್ಯದ ವ್ಯವಸ್ಥೆ ಸಮರ್ಪಕವಾಗಿ ಇದೆಯೇ ; ಇಲ್ಲದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ?